ಪ್ರಧಾನ ಸಿವಿಲ್ ಮತ್ತು ಜೆಎಮ್ಎಫ್ ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.

ಸಿಸಿ ನಂ.**1191/2024**

ಪಿರ್ಯಾದಿ : ಶ್ರೀ ಶಂಕ್ರಪ್ಪ ತಂದೆ ಶರಣಪ್ಪ,
ವಯಸ್ಸುಃ 49 ವರ್ಷ, ಉಃ ಒಕ್ಕಲುತನ, ಸಾಃ ಬಳಿಚಕ್ರ ಗ್ರಾಮ,
ತಾಃ ಮತ್ತು ಜಿಃ ಯಾದಗಿರಿ.

ಆರೋಪಿ : ಶ್ರೀ ವೆಂಕಟೇಶ ತಂದೆ ದೊಡ್ಡ ಹನಮಂತ ಬೋಯಿನ್,
ವಃ 44 ವರ್ಷ, ಸಾಃ ಬಳಿಚಕ್ರ ಗ್ರಾಮ, ತಾಃ ಮತ್ತು ಜಿಃ ಯಾದಗಿರಿ.

ದಂಡ ಪ್ರಕ್ರಿಯಾ ಸಂಹಿತೆ ಕಲಂ **313** ರ ಅಡಿಯಲ್ಲಿ ಆರೋಪಿತನ ಹೇಳಿಕ

ಪ್ರಶ್ನೆಃ1ಃ ನೀವು ದೂರುದಾರರ ವಿಚಾರಣೆಯನ್ನು ಕೇಳಿದ್ದೀರಾ?

ಆರೋಪಿಯ ಉತ್ತರಃ

ಪ್ರಶ್ನೆ2 : ಪ್ರಾಸಾ-1 ಶ್ರೀ ಶಂಕ್ರಪ್ಪ ತಂದೆ ಶರಣಪ್ಪ ಇವರು ಪಿರ್ಯಾದಿದಾರರಾಗಿದ್ದು, ತಮ್ಮ ಮುಖ್ಯ ವಿಚಾರಣೆಯಲ್ಲಿ ಪಿರ್ಯಾದಿದಾರರು ಮತ್ತು ಆಪಾದಿತನಾದ ನೀವು ಪರಿಚಯಸ್ಥರಾಗಿರುತ್ತೀರಿ ಹಾಗೂ ಸದರಿ ಪರಿಚಯದ ಆಧಾರದ ಮೇಲೆ ನೀವು ದೂರುದಾರರಿಂದ ದಿನಾಂಕ 25.12.2021 ರಂದು ರೂ.1,80,000/-ಗಳನ್ನು ಸಾಲಪಡೆದಿರುತ್ತೀರಿ ಎಂದು ನುಡಿದಿದ್ದಾರೆ. ಇದರ ಬಗ್ಗೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ

ಪ್ರಶ್ನೆಃ 3 ಃ ಪ್ರಾಸಾ 1 ಇವರು ತಮ್ಮ ಮುಖ್ಯ ವಿಚಾರಣೆಯಲ್ಲಿ ಮುಂದುವರೆದು, ಸದರಿ ಹಣವನ್ನು ಮರುಪಾವತಿ ಮಾಡುವಂತೆ ಒತ್ತಾಯಿಸಿದಾಗ ಆಪಾದಿತನಾದ ನೀವು ಖಾತೆ ಹೊಂದಿರುವ ಬ್ಯಾಂಕ್ ಆಫ್ ಬರೋಡ, ಬಳಿಚಕ್ರ ಶಾಖೆಗೆ ಸೇರಿದ 000001 ಸಂಖ್ಯೆಯ ಚೆಕ್ ನಲ್ಲಿ ರೂ. 1,00,000/- ಮತ್ತು 000002 ಸಂಖ್ಯೆಯ ಚೆಕ್ ನಲ್ಲಿ ರೂ. 80,000/- ಹಾಗೂ ದಿನಾಂಕ 01.02.2024 ಎಂದು ನಮೂದು ಮಾಡಿ ಬ್ಯಾಂಕಿಗೆ ಹಾಜರುಪಡಿಸಿ ನಗದೀಕರಿಸಿಕೊಳ್ಳುವಂತೆ ನೀಡಿದ್ದಿರಿ ಎಂದು ನುಡಿದಿದ್ದಾರೆ. ಇದರ ಬಗ್ಗೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ

ಪ್ರಶ್ನೆ 4ಃ ಪ್ರಾಸಾ 1 ಇವರು ತಮ್ಮ ಮುಖ್ಯ ವಿಚಾರಣೆಯಲ್ಲಿ ಮುಂದುವರೆದು, ಸದರಿ ಚೆಕ್‌ನ್ನು ಪಿರ್ಯಾದುದಾರರು ನಗದೀರಣಕ್ಕಾಗಿ ತಾವು ಖಾತೆ ಹೊಂದಿರುವ ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಯಾದಗಿರಿ ಶಾಖೆಯ ಮೂಲಕ ದಿನಾಂಕ 29.03.2024 ರಂದು ಹಾಜರು ಪಡಿಸಿದಾಗ, “Funds

Insufficient” ಎಂಬ ಹಿಂಬರಹದೊಂದಿಗೆ ಅಮಾನ್ಯಗೊಂಡು ಚೆಕ್ಕನ್ನು ದಿನಾಂಕ 31.03.2024 ರಂದು ವಾಪಸ್ಸು ನೀಡಿರುತ್ತಾರೆ ಎಂದು ನುಡಿದಿದ್ದಾರೆ. ಇದರ ಬಗ್ಗೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ

ಪ್ರಶ್ನೆ 5ಃ ಪ್ರಾಸಾ 1 ಇವರು ತಮ್ಮ ಮುಖ್ಯ ವಿಚಾರಣೆಯಲ್ಲಿ ಮುಂದುವರೆದು, ನಂತರ ಪಿರ್ಯಾದುದಾರರು ತಮ್ಮ ವಕೀಲರ ಮೂಲಕ ದಿನಾಂಕ 06.04.2024 ರಂದು ಅಪಾದಿತನಾದ ನಿಮ್ಮ ವಿಳಾಸಕ್ಕೆ ನೊಂದಾಯಿತ ಅಂಚೆಯ ಮೂಲಕ ತಿಳುವಳಿಕೆ ಪತ್ರವನ್ನು ಕಳುಹಿಸಿದ್ದು, ಸದರಿ ನೋಟಿಸ್ ದಿನಾಂಕ 15.04.2024 ರಂದು ಜಾರಿಯಾಗಿರುತ್ತದೆ. ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲದಿದ್ದರು ದೂರುದಾರರಿಗೆ ಚೆಕ್‌ನ್ನು ನೀಡಿ ನಂತರ ಚೆಕ್ ಮೊತ್ತವನ್ನು ಪಾವತಿ ಮಾಡದೆ ಇರುವುದರ ಮೂಲಕ ವರ್ಗಾವಣೀಯ ಲಿಖಿತ ಕಾಯ್ದೆ ಕಲಂ 138 ರಡಿ ಅಪರಾಧ ಎಸಗಿದ್ದೀರಿ ಎಂದು ನುಡಿದಿದ್ದಾರೆ. ಇದರ ಬಗ್ಗೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ

ಪ್ರಶ್ನೆ **6**ಃ ಈ ಪ್ರಕರಣದ ಬಗ್ಗೆ ನೀವು ಏನಾದರೂ ಹೇಳಲು ಇಚ್ಛಿಸುತ್ತೀರಾ?

ಆರೋಪಿಯ ಉತ್ತರಃ

ಪ್ರಶ್ನೆ **7** ಃ ನಿಮ್ಮ ಪರ ಯವುದಾದರೂ ಸಾಕ್ಷಿಯನ್ನು ವಿಚಾರಣೆ ಮಾಡುತ್ತೀರಾ?

ಆರೋಪಿಯ ಉತ್ತರಃ

(ಮೇಲ್ಕಂಡಂತೆ ಆಪಾದಿತರಿಗೆ ತಿಳಿದ ಭಾಷಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಪ್ರಶ್ನಿಸಿ, ಅವರು ನೀಡಿದ ಹೇಳಿಕೆಯನ್ನು ಪಡೆದುಕೊಳ್ಳಲಾಯಿತು.)

ದಿನಾಂಕಃ 22.01.2026<br>ಸ್ಥಳಃ ಯಾದಗಿರಿ

ಪ್ರಧಾನ ಸಿವಿಲ್ ಮತ್ತು ಜೆ ಎಂ ಎಫ ಸಿ<br>ನ್ಯಾಯಾಧೀಶರು,ಯಾದಗಿರಿ.